ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಸೋಲಾರ್ ವಿದ್ಯುತ್ ಉತ್ಪಾದನೆ ಕುರಿತು

ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :-

1299 (1530) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸೋಲಾರ್ ವಿದ್ಯುತ್ ಉತ್ಪಾದನೆ ಮಾಡುವ ಯೋಜನೆ ಎಂದಿನಿಂದ ಜಾರಿಗೆ ಬಂದಿದೆ; ರಾಜ್ಯದಲ್ಲಿ ಸದರಿ ಯೋಜನೆಯ ಅಡಿಯಲ್ಲಿ ಎಷ್ಟು ಜನ ರೈತರ ಜಮೀನಿನಲ್ಲಿ ಸೋಲಾರ್ ಉತ್ಪಾದನೆ ಮಾಡಲು ಇಲ್ಲಿಯವರೆವಿಗೆ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಬಂದಿದ್ದಲ್ಲಿ, ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಬಂದ ಅರ್ಜಿಗಳಲ್ಲಿ ಪರಿಗಣಿಸಿದವರ ಸಂಖ್ಯೆ ಎಷ್ಟು ; ಎಷ್ಟು ರೈತರಿಂದ ಸೋಲಾರ್ ವಿದ್ಯುತ್ ಖರೀದಿಸಲು ಕರಾರು ಮಾಡಿಕೊಳ್ಳಲಾಗಿದೆ ; ರೈತರಿಗೆ ಇದರಿಂದಾಗುವ ಪ್ರಯೋಜನೆಗಳಾವುವು ;

(ಇ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಸೋಲಾರ್ ಯೋಜನೆಯಿಂದ ಇದುವರೆಗೂ ಎಷ್ಟು ಮೆಗಾ ವ್ಯಾಟ್ ಸೋಲಾರ್ ವಿದ್ಯುತ್ ಉತ್ಪಾದನೆ ಮಾಡಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)